# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 123(861)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ನಗರಾಭಿವೃದ್ಧಿ ಸಚಿವರು

ವಿಷಯ : ಸ್ಮಾರ್ಟ್ ಸಿಟಿ ಯೋಜನೆ ಕಾಮಗಾರಿ ಬಗ್ಗೆ

(ಅ) ಸ್ಮಾರ್ಟ್ ಸಿಟಿ ಯೋಜನೆಯಡಿ ಆಯ್ಕೆಯಾದ ಬೆಳಗಾವಿ ನಗರದಲ್ಲಿ ಯೋಜನೆಯ ಅನುಷ್ಠಾನ ತೀರಾ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸದರಿ ಯೋಜನೆಯ ಕಾಮಗಾರಿಗಳು ತುಂಬಾ ನಿಧಾನಗತಿಯಲ್ಲಿ ಸಾಗಲು ಕಾರಣಗಳೇನು;

(ಇ) ಸ್ಮಾರ್ಟ್ ಸಿಟಿ ಯೋಜನೆಯ ಕಾಮಗಾರಿಗಳು ತ್ವರಿತಗತಿಯಲ್ಲಿ ಕಾರ್ಯನಿರ್ವಹಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಈ) ಸ್ಮಾರ್ಟ್ ಸಿಟಿ ಯೋಜನೆಯ ಕಾಮಗಾರಿಗಳಲ್ಲಿ ಅವ್ಯವಹಾರ, ಹಣ ದುರ್ಬಳಕೆ ಪ್ರಕರಣಗಳು ಕೇಳಿ ಬಂದಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಬೆಳಗಾವಿ ಹಾಗೂ ಬೆಂಗಳೂರು ಸ್ಮಾರ್ಟ್ ಸಿಟಿ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು?